ಓ.ಎಸ್.10/2026, ಪಿ.ಡಬ್ಲ್ಯೂ.1 ಹೆಸರುಃ ತೇಜಸ್ವಿ.ಪಿ.ಬಿ.

**<u>ದಿಃ06-07-2026 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಮುಖ್ಯ ವಿಚಾರಣೆಃ ವಾದಿಯ ಪರ ಶ್ರೀ ಜಿ.ಎಸ್.ಎಸ್. ವಕೀಲರಿಂದಃ</u>**

ನಾನು ನನ್ನ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಇದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ. ಪ್ರಮಾಣ ಪತ್ರದಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತದೆ.

ಪ್ರತಿವಾದಿಯು ನಮ್ಮ ಬ್ಯಾಂಕಿಗೆ ಸಾಲವನ್ನು ಪಡೆಯುವ ಸಲುವಾಗಿ ನೀಡಿದಂತಹ ದಿನಾಂಕಃ18.06.2015 ರ ಸಾಲದ ಅರ್ಜಿಯನ್ನು ಹಾಜರುಪಡಿಸಿದ್ದು ನಿಪಿ-1 ಎಂದು ಗುರುತಿಸಲಾಯಿತು.

ಪ್ರತಿವಾದಿಯು ನಮ್ಮ ಬ್ಯಾಂಕಿಗೆ ಸಾಲವನ್ನು ಪಡೆದುಕೊಂಡ ಕಾಲಕ್ಕೆ ವಾದಿ ಬ್ಯಾಂಕಿನವರು ಸಾಲವನ್ನು ಮಂಜೂರಾತಿ ಮಾಡಿದ ಕುರಿತಾಗಿ ದಾಖಲಾತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಪ್ರತಿವಾದಿಯು ನಮ್ಮ ಬ್ಯಾಂಕಿನಿಂದ ಸಾಲವನ್ನು ಪಡೆದುಕೊಳ್ಳುವ ಕಾಲಕ್ಕೆ ಜಾರಿಮಾಡಿದಂತಹ ಸಾಲದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

ಪ್ರತಿವಾದಿಯು ನಮ್ಮ ಬ್ಯಾಂಕಿನಿಂದ ಸಾಲ ಪಡೆಯುವ ಕಾಲಕ್ಕೆ ಜಾರಿಮಾಡಿಕೊಟ್ಟಂತಹ ನೋಂದಣಿ ಸರಳ ಅಡಮಾನ ಪತ್ರದ ಕುರಿತಾದ ದಾಖಲಾತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು ಗುರುತಿಸಲಾಯಿತು.

ಪ್ರತಿವಾದಿಗೆ ಸಂಬಂಧಿಸಿದ ಸಾಲದ ಎಕ್ಸ್‌ಟ್ರಾಕ್ಟ್‌ನ್ನು ಹಾಜರುಪಡಿಸಿದ್ದು ನಿಪಿ-5 ಎಂದು ಗುರುತಿಸಲಾಯಿತು.

**<u>ಪ್ರತಿವಾದಿ ಹಾಜರಿದ್ದು, ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲಿಗಾಗಿ ಮುಂದೂಡಲಾಯಿತು.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ